**ಕರ್ನಾಟಕ ಸರ್ಕಾರ**

***ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-12.***

ದಿನಾಂಕ: 6-03-2018

ಸಂಖ್ಯೆ: ಪಪೂಶಿ/ಶೈಶಾ.04/ದಾ.ವೇ.ಶೈ.ಚ/2017-18

**ಸುತ್ತೋಲೆ**

**ವಿಷಯ:-** 2018-2019 ನೇ ಸಾಲಿಗ ಸಂಬಂಧಿಸಿದಂತೆ, ಪ್ರಥಮ ಹಾಗೂ ದ್ವಿತೀಯ ಪಿಯುಸಿ ದಾಖಲಾತಿ ವೇಳಾಪಟ್ಟಿ ಮತ್ತು ಶೈಕ್ಷಣಿಕ ಚಟುವಟಿಕೆಗಳ ಮಾಹಿತಿ.

**ಉಲ್ಲೇಖ:-** ಏಕಕಡತ ಸಂಖ್ಯೆ :ಶೈಶಾ-04/ದಾ.ವೇ.ಶೈ.ಚ/2017-18

-------

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಏಕಕಡತದಲ್ಲಿನ ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಆದೇಶದಂತೆ 2017-2018 ನೇ ಶೈಕ್ಷಣಿಕ ಸಾಲಿನ ಪ್ರಥಮ ಹಾಗೂ ದ್ವಿತೀಯ ಪಿಯುಸಿಯ ಶೈಕ್ಷಣಿಕ ಚಟುವಟಿಕೆಗಳ ಪರಿಷ್ಕೃತ ವೇಳಾಪಟ್ಟಿ ಈ ಕೆಳಕಂಡಂತೆ ಇರುತ್ತದೆ.

| | | |
|---|---|---|
| 1 | ಶೈಕ್ಷಣಿಕ ವರ್ಷದ ಕೊನೆಯ ಕಾರ್ಯನಿರತ ದಿನಾಂಕ. | 17.03.2018 |
| 2 | ಬೇಸಿಗೆ ರಜೆ ಪ್ರಾರಂಭಿಕ ದಿನಾಂಕ. | 18.03.2018 |
| 3 | ಪ್ರಥಮ ಪಿಯುಸಿ ಫಲಿತಾಂಶ ಘೋಷಣೆ ದಿನಾಂಕ. | 19.03.2018 |
| 4 | ಎನ್.ಎಸ್.ಕ್ಯೂ.ಎಫ್ ಹೊಂದಿರುವಂತಹ ಪದವಿ ಪೂರ್ವ ಕಾಲೇಜುಗಳಲ್ಲಿ ಪ್ರಾಯೋಗಿಕ ಪರೀಕ್ಷೆಗಳು ಮುಕ್ತಾಯಗೊಂಡಿದ್ದಲ್ಲಿ ಪ್ರಥಮ ಪಿಯುಸಿ ಫಲಿತಾಂಶ ಘೋಷಣೆ ದಿನಾಂಕ. | 19.03.2018 |
| 5 | ಎನ್.ಎಸ್.ಕ್ಯೂ.ಎಫ್ ಹೊಂದಿರುವಂತಹ ಪದವಿ ಪೂರ್ವ ಕಾಲೇಜುಗಳಲ್ಲಿ ಒಂದು ವೇಳೆ ಪ್ರಾಯೋಗಿಕ ಪರೀಕ್ಷೆಗಳು ಮುಕ್ತಾಯಗೊಳ್ಳದಿದ್ದಲ್ಲಿ ಪ್ರಥಮ ಪಿಯುಸಿ ಫಲಿತಾಂಶ ಘೋಷಣೆ ದಿನಾಂಕ. | ಪ್ರಾಯೋಗಿಕ ಪರೀಕ್ಷೆಗಳು ಮುಕ್ತಾಯಗೊಂಡನಂತರ ಸಂಬಂಧಪಟ್ಟ ಉಪನಿರ್ದೇಶಕರಿಂದ ಅನುಮೋದನೆ ಪಡೆದು ಫಲಿತಾಂಶ ಘೋಷಿಸಬಹುದಾಗಿರುತ್ತದೆ. |

2018-2019 ನೇ ಶೈಕ್ಷಣಿಕ ಸಾಲಿನ ಪ್ರಥಮ ಹಾಗೂ ದ್ವಿತೀಯ ಪಿಯುಸಿ ತರಗತಿಗಳ ಪ್ರಾರಂಭಿಕ ದಿನಾಂಕಗಳನ್ನು ನಂತರದ ದಿನಗಳಲ್ಲಿ ತಿಳಿಸಲಾಗುವುದು.

(ಮಾನ್ಯ ನಿರ್ದೇಶಕರಿಂದ ಅನುಮೋದಿಸಲ್ಪಟ್ಟಿದೆ).

6/3/18

ಜಂಟಿ ನಿರ್ದೇಶಕರು(ಶೈಕ್ಷಣಿಕ),
ಪದವಿ ಪೂರ್ವ ಶಿಕ್ಷಣ ಇಲಾಖೆ.

ಪ್ರತಿಗಳು:-

1. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಇವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ- ತಮ್ಮ ಜಿಲ್ಲಾ ವ್ಯಾಪ್ತಿಗೆ ಒಳಪಡುವ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರ ಗಮನಕ್ಕೆ ತರಲು ಸೂಚಿಸಿದೆ.
2. ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರುಗಳಿಗೆ- ಜಿಲ್ಲಾ ಉಪನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ ರವರ ಮೂಲಕ.
3. ನಿರ್ದೇಶಕರ ಅಪ್ತ ಶಾಖೆ ಪದವಿ ಪೂರ್ವ ಶಿಕ್ಷಣ ಇಲಾಖೆ, ಮಾಹಿತಿಗಾಗಿ.
4. ಇ-ಆಡಳಿತ ಶಾಖೆ ಪದವಿ ಪೂರ್ವ ಶಿಕ್ಷಣ ಇಲಾಖೆ, ವೆಬ್‌ಸೈಟ್‌ನಲ್ಲಿ ಅಳವಡಿಸಲು ಮುಂದಿನ ಕ್ರಮಕ್ಕಾಗಿ.
5. ಕಛೇರಿ ಪ್ರತಿ.